ಹಿನ್ನೀರಿನ ಸಮಸ್ಯೆಗಳು

750(853) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

ಅ) ರಾಮನಗರ ತಾಲ್ಲೂಕು, ಬಿಡದಿ ಹೋಬಳಿಯಲ್ಲಿ ಈಗಲ್ ಟನ್ ರೆಸಾರ್ಟ್‌ನವರು ಸುಪ್ರೀಂಕೋರ್ಟ್ ಆಜ್ಞೆಯನ್ನು ಉಲ್ಲಂಘಿಸಿ ಕಾರ್ಯ ಚಟುವಟಿಕೆ ನಡೆಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ನ್ಯಾಯಾಲಯದ ಆಜ್ಞೆಯನ್ನು ದಿಕ್ಕರಿಸಿ, ಈಗಲ್ ಟನ್ ರೆಸಾರ್ಟ್‌ನವರು, ಷೆಡ್ಯೂಲ್ ಜಾಗದಲ್ಲಿ ಭೂ ಪರಿವರ್ತನೆ, ವರ್ಗಾವಣೆ, ಕ್ರಯ ಮತ್ತು ಅಭಿವೃದ್ಧಿ ಕಾಮಗಾರಿಗಳು ಪ್ರತಿನಿತ್ಯ ನಡೆಸಿಕೊಂಡು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಸದರಿ ಈಗಲ್ ಟನ್ ವಿರುದ್ಧ ನ್ಯಾಯಾಂಗ ನಿಂದನಾ ಅರ್ಜಿ ಸಲ್ಲಿಸದಿರಲು ಸರ್ಕಾರಕ್ಕಿರುವ ಪ್ರಬಲ ಕಾರಣಗಳೇನು ?

ಶ್ರೀ ಜಿ. ಕರುಣಾಕರರೆಡ್ಡಿ (ಕಂದಾಯ ಸಚಿವರು) :

ಅ) ಹೌದು.

ಆ) ಹೌದು. ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಸಿವಿಲ್ ಅಪೀಲ್ ಸಂಖ್ಯೆ :5181/2003ಕ್ಕೆ ಸಂಬಂಧಿಸಿದಂತೆ ಸದರಿ ಸಂಸ್ಥೆಯು ಅನಧಿಕೃತ ಸ್ವಾಧೀನದಲ್ಲಿರುವ ಸರ್ಕಾರಿ ಜಮೀನಿನಲ್ಲಿ ಕೈಗೊಂಡಿರುವ ಚಟುವಟಿಕೆಗಳ ಬಗ್ಗೆ ಮಾಹಿತಿಯನ್ನು ಪ್ರಮಾಣ ಪತ್ರದ ಮೂಲಕ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗಿರುತ್ತದೆ.

ಇ) ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಸಿವಿಲ್ ಅಪೀಲ್ ಸಂಖ್ಯೆ : 5181/2003ಕ್ಕೆ ಸಂಬಂಧಿಸಿದಂತೆ ಸದರಿ ಸಂಸ್ಥೆಯು ಅನಧಿಕೃತ ಸ್ವಾಧೀನದಲ್ಲಿರುವ ಸರ್ಕಾರಿ ಜಮೀನಿನಲ್ಲಿ ಕೈಗೊಂಡಿರುವ ಚಟುವಟಿಕೆಗಳ ಬಗ್ಗೆ ಮಾಹಿತಿಯನ್ನು ಪ್ರಮಾಣ ಪತ್ರದ ಮೂಲಕ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗಿರುವುದರಿಂದ ನ್ಯಾಯಾಲಯ ನಿಂದನಾ ಅರ್ಜಿ ಸಲ್ಲಿಸುವ ಪ್ರಶ್ನೆ ಉದ್ಭವಿಸುವುದಿಲ್ಲವೆ.